ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 23/03/2019

## ನಟರ ವಿರುದ್ಧ ಧಮ್ಕಿ: ಶಾಸಕನ ವಿರುದ್ಧ ಎಫ್‌ಐಆರ್ ದಾಖಲು

**ಮಂಡ್ಯ:** ಚುನಾವಣಾ ಚಿತ್ರನಟರಿಗೆ ಬೆದರಿಕೆ ಹಾಕುವ ಮೂಲಕ ನೀತಿ ಸಂಹಿತೆ ಉಲ್ಲಂಘಿಸಿದ ಆರೋಪದ ಮೇಲೆ ಕೆ.ಆರ್.ಪೇಟೆ ಶಾಸಕ ಕೆ.ಸಿ.ನಾರಾಯಣಗೌಡ ವಿರುದ್ಧ ಕೆ.ಆರ್.ಪೇಟೆ ಟೌನ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಕೆ.ಆರ್.ಪೇಟೆ ಪಟ್ಟಣದಲ್ಲಿ ಮಾ. 19ರಂದು ನಡೆದ ಜೆಡಿಎಸ್ ಕಾರ್ಯಕರ್ತರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ್ದ ನಾರಾಯಣ ಗೌಡ, ಸುಮಲತಾ ಅವರ ಬೆನ್ನಿಗೆ ನಿಂತಿರುವ ಚಿತ್ರನಟರಾದ ದರ್ಶನ್ ಮತ್ತು ಯಶ್ ಅವರ ಆಸ್ತಿ ತನಿಖೆ ನಡೆಸುವುದಾಗಿ ಎಚ್ಚರಿಸಿದ್ದರು. ಈ ಸಂಬಂಧ ಕೆ.ಆರ್.ಪೇಟೆ ಸಂಚಾರಿ ತಪಾಸಣಾ ದಳ-2ರ ಅಧಿಕಾರಿ ರವಿಕುಮಾರ್ ಅವರು ದೂರು ದಾಖಲಿಸಿದ್ದಾರೆ. ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗಿದೆ. ಭಾಷಣದ ವೀಡಿಯೋವನ್ನು ಮುಂದಿನ ದಿನಗಳಲ್ಲಿ ಹಾಜರುಪಡಿಸಲಾಗುವುದು ಎಂದು ತಿಳಿಸಿದ್ದಾರೆ.